**ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ**

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

18 ಕೋರ್ಟ್ ಮಾಹಿತಿ

ಇಲಾಖೆ / ವಿಷಯ : DEPARTMENT / SUBJECT: ವಿಧಾನಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ

ದಿನಾಂಕ : DATE : 13/4/21

# ಭದ್ರಾವತಿ ಶಾಸಕ ಸಂಗಮೇಶ ಪುತ್ರ ಸೇರಿ 9 ಮಂದಿಗೆ ಜಾಮೀನು

13-4-21

**ಬೆಂಗಳೂರು:** ಕಬಡ್ಡಿ ಪಂದ್ಯಾವಳಿ ವೇಳೆ ನಡೆದ ಗಲಾಟೆ ಪ್ರಕರಣದಲ್ಲಿ ಬಂಧನಕ್ಕೊಳಗಾಗಿದ್ದ ಭದ್ರಾವತಿ ಶಾಸಕ ಬಿ.ಕೆ. ಸಂಗಮೇಶ ಅವರ ಪುತ್ರ ಬಸವೇಶ ಸೇರಿ 9 ಮಂದಿಗೆ ಹೈಕೋರ್ಟ್ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.

» **ಕಬಡ್ಡಿ ಪಂದ್ಯಾವಳಿ ವೇಳೆ ಗಲಾಟೆ ಪ್ರಕರಣ**

ಆರೋಪಿಗಳು ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಸೋಮವಾರ ವಿಚಾರಣೆ ನಡೆಸಿದ ನ್ಯಾ.ಅಶೋಕ್ ಎಸ್. ನಿಜಗಣ್ಣನವರ್ ಅವರಿದ್ದ ಪೀಠ, ಅರ್ಜಿದಾರರು ತಲಾ 1 ಲಕ್ಷ ರೂ. ವೈಯಕ್ತಿಕ ಬಾಂಡ್ ಹಾಗೂ ಅಷ್ಟೇ ಮೊತ್ತದ ಇಬ್ಬರ ಶ್ಯೂರಿಟಿ ಒದಗಿಸಬೇಕು, ತನಿಖೆಗೆ ಸಹಕರಿಸಬೇಕು, ಸಾಕ್ಷ್ಯ ನಾಶ ಪಡಿಸಬಾರದು ಎಂಬ ಷರತ್ತುಗಳನ್ನು ವಿಧಿಸಿ ಜಾಮೀನು ಮಂಜೂರು ಮಾಡಿತು. ಗಲಾಟೆ ಪ್ರಕರಣದಲ್ಲಿ ಬಸವೇಶ, ಮಂಜುನಾಥ, ಸಂತೋಷ್, ಸಿ. ಕಿರಣ್, ವೈ. ಪರಶುರಾಮ, ಆರ್. ಸುನೀಲ್, ಫೈಸಲ್, ರಾಜೇಶ್ ಹಾಗೂ ಪರಶುರಾಮ ಅವರನ್ನು ಪೊಲೀಸರು ಬಂಧಿಸಿದ್ದರು.

**ನಾಲ್ವರಿಗೆ ನಿರೀಕ್ಷಣಾ ಜಾಮೀನು:** ಇದೇ ಪ್ರಕರಣದಲ್ಲಿ ಬಂಧನ ಭೀತಿ ಎದುರಿಸುತ್ತಿದ್ದ ನಂದೀಶ, ಸುನೀಲ್, ಬಿ.ಎಂ. ಮಂಜುನಾಥ್ ಹಾಗೂ ಬಿ.ಎಂ. ರವಿಕುಮಾರ್ ಎಂಬುವರಿಗೂ ಹೈಕೋರ್ಟ್ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ. ನ್ಯಾಯಾಲಯದ ಆದೇಶದ ಪ್ರತಿ ದೊರೆತ 15 ದಿನಗಳ ಒಳಗೆ ತನಿಖಾಧಿಕಾರಿ ಮುಂದೆ ಹಾಜರಾಗಬೇಕು ಎಂದು ಆದೇಶಿಸಿದೆ.